## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ. 1354/2021

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಅಣ್ಣಪ್ಪ | CW: 4 | PW: 3 |
| ತಂದೆಯ ಹೆಸರು | : | ಪುಟ್ಟಪ್ಪ | | |
| ವಯಸ್ಸು | : | 38 | | |
| ವೃತ್ತಿ | : | ವ್ಯವಸಾಯ | | |
| ವಾಸಸ್ಥಳ | : | ಸುರಹೊನ್ನೆ | | |

ದಿನಾಂಕಃ 17.10.2025 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ - ಮಾನ್ಯ ಸ.ಸ.ಅ.ರವರಿಂದಃ-

ಆರೋಪಿ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ 1 ದಾಖಲೆಗೆ ನಾನು ಸಹಿಯನ್ನು ಮಾಡಿರುತ್ತೇನೆ. ಆದರೆ ಅದರಲ್ಲಿ ಏನು ಬರೆದಿದೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ 2 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ 2(ಸಿ) ಎಂದು ಗುರುತಿಸಲಾಯಿತು. ನಿಪಿ.6 ಕಚ್ಚಾ ನಕಾಶೆಯಲ್ಲಿ ಸಾಕ್ಷಿಯು ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ 6(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ 3 ಮತ್ತು 4 ರ ಪೋಟೋಗಳನ್ನು ನೋಡಿ ಗುರುತಿಸಿದ್ದು ಅದನ್ನು ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ. ನ್ಯಾಯಾಲಯದ ಮುಂದಿರುವ ಮು.ಮಾ 1 ಮತ್ತು 2 ನ್ನು ನಾನು ಈ ಹಿಂದೆ ನೋಡಿಲ್ಲ.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

<u>ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ–</u>

ದಿಃ 24.04.2021 ರಂದು ಪೋಲೀಸರು ಜಯನಗರ ಗ್ರಾಮದ ವೆಂಕಟೇಶ ಭೋವಿ ಮನೆ ಪಕ್ಕದಲ್ಲಿ ಹಾದುಹೋಗಿರುವ ಸಿಮೆಂಟ್ ರಸ್ತೆಯಲ್ಲಿ ನನ್ನ ಹಾಗೂ ಚಾಸಾ 3 ರವರ ಸಮಕ್ಷಮ ಸಂಜೆ 6.30 ರಿಂದ 8.30 ಗಂಟೆ ಸಮಯದಲ್ಲಿ ನಿಪಿ 2 ರಂತೆ ಸ್ಥಳ ಮತ್ತು ಅಮಾನತ್ತು ಪಂಚನಾಮೆ ಜರುಗಿಸಿ, ನಿಪಿ 3 ಮತ್ತು 4 ರಂತೆ ಪೋಟೋಗಳನ್ನು ತೆಗೆದು ಮು.ಮಾ 1 ಮತ್ತು 2 ನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆ ಸಂದರ್ಭ ಪೋಲೀಸರು ಕಚ್ಚಾ ನಕಾಶೆ ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲುಃ– ಆರೋಪಿ ಪರ ವಕೀಲರಿಂದಃ–</u>

ಆರೋಪಿ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.